**ಪ್ರಧಾನ ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ. ರವರ ನ್ಯಾಯಾಲಯ ಬೇಲೂರು.**

**ಸಿ.ಸಿ.ನಂ. 299/2026**

ಪಿರ್ಯಾದಿದಾರರುಃ ರಾಜ್ಯ ಸರ್ಕಾರದ ಪರವಾಗಿ
ಹಳೇಬೀಡು ಪೋಲಿಸ್ ಠಾಣೆ

ಃವಿರುದ್ಧಃ

ಆರೋಪಿ ಃ ಶ್ರೀ ಹಾಲಪ್ಪ ಬಿನ್ ಪುಪ್ಪೇಗೌಡ,
48 ವರ್ಷ, ಕೆಎ 46 ಎಂ 4411 ನಂಬರಿನ ಐಶರ್ ಟ್ರ್ಯಾಕ್ಟರ್ ನ ಚಾಲಕ,
ವಾಸಃ- ವೀರದೇವನಹಳ್ಳಿ ಗ್ರಾಮ, ಹಳೇಬೀಡು ಹೋಬಳಿ
ಬೇಲೂರು ತಾಲ್ಲೂಕು, ಹಾಸನ ಜಿಲ್ಲೆ.

**ಆರೋಪಣೆ**

ದಿನಾಂಕ 13.09.2022 ರಂದು ಬೆಳಗ್ಗೆ 09.30 ಗಂಟೆ ಸಮಯದಲ್ಲಿ ಹಳೇಬೀಡು ಪೊಲೀಸ್ ಠಾಣಾ ಸರಹದ್ದಿಗೆ ಸೇರಿದ ಚೀಲನಾಯ್ಕನಹಳ್ಳಿ ಹತ್ತಿರ ಚಾಸಾ-2 ರವರು ಕೆಎ 13 ಇಯು 6877 ರ ನಂಬರಿನ ಹೋಂಡಾ ಆಕ್ಟಿವಾ ಸ್ಕೂಟಿಯನ್ನು ಪನ್ನಾಥಪುರ ಕಡೆಯಿಂದ ಚೀಲನಾಯ್ಕನಹಳ್ಳಿ ಕಡೆಗೆ ಬರುತ್ತಿದ್ದಾಗ, ಆರೋಪಿಯಾದ ನೀವು ಕೆಎ 46 ಎಂ 4411 ನಂಬರಿನ ಐಶರ್ ಟ್ರ್ಯಾಕ್ಟರ್ ಅನ್ನು ಸಾರ್ವಜನಿಕ ರಸ್ತೆಯಲ್ಲಿ ಮಾನವನ ಪ್ರಾಣಕ್ಕೆ ಹಾನಿ ಉಂಟು ಮಾಡುವ ರೀತಿಯಲ್ಲಿ ಅತಿವೇಗ ಮತ್ತು ಅಜಾಗರೂಕತೆಯಿಂದ ಚಾಲನೆ ಮಾಡಿಕೊಂಡು ಬಂದು ಚಾಸಾ-2 ರವರು ಚಾಲನೆ ಮಾಡುತ್ತಿದ್ದ ಸ್ಕೂಟಿಗೆ ಡಿಕ್ಕಿ ಮಾಡಿ ಅಪಘಾತಪಡಿಸಿರುತ್ತೀರಿ, ಆದ್ದರಿಂದ ಆರೋಪಿಯಾದ ನೀವು ಭಾರತೀಯ ದಂಡ ಸಂಹಿತೆ ಕಲಂ 279 ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದಲ್ಲಿ ಎಸಗಿರುತ್ತೀರಿ ಎಂದು ಆರೋಪಿಸಲಾಗಿದೆ.

ಎರಡನೆಯದಾಗಿ ಮೇಲೆ ಹೇಳಿದ ದಿನಾಂಕ, ಸಮಯ ಹಾಗೂ ಸ್ಥಳದಲ್ಲಿ ಆರೋಪಿಯಾದ ನೀವು ಕೆಎ 46 ಎಂ 4411 ನಂಬರಿನ ಐಶರ್ ಟ್ರ್ಯಾಕ್ಟರ್ ಅನ್ನು ಸಾರ್ವಜನಿಕ ರಸ್ತೆಯಲ್ಲಿ ಮಾನವನ ಪ್ರಾಣಕ್ಕೆ ಹಾನಿ ಉಂಟು ಮಾಡುವ ರೀತಿಯಲ್ಲಿ ಚಾಲನೆ ಮಾಡಿಕೊಂಡು ಬಂದು ಚಾಸಾ-2 ರವರು ಚಾಲನೆ ಮಾಡುತ್ತಿದ್ದ ಕೆಎ 13 ಇಯು 6877 ನಂಬರಿನ ಸ್ಕೂಟಿಗೆ ಡಿಕ್ಕಿ ಮಾಡಿ ಅಪಘಾತಪಡಿಸಿದ ಪರಿಣಾಮ, ಚಾಸಾ-2 ರವರಿಗೆ ಸಾಮಾನ್ಯ ಸ್ವರೂಪದ ರಕ್ತಗಾಯವನ್ನು ಉಂಟು ಮಾಡಿರುತ್ತೀರಿ, ಆದ್ದರಿಂದ ಆರೋಪಿಯಾದ ನೀವು ಭಾರತೀಯ ದಂಡ ಸಂಹಿತೆ ಕಲಂ 337 ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದಲ್ಲಿ ಎಸಗಿರುತ್ತೀರಿ ಎಂದು ಆರೋಪಿಸಲಾಗಿದೆ.

ಮೂರನೆಯದಾಗಿ ಮೇಲೆ ಹೇಳಿದ ದಿನಾಂಕ, ಸಮಯ ಹಾಗೂ ಸ್ಥಳದಲ್ಲಿ ಆರೋಪಿಯಾದ ನೀವು ಕೆಎ 46 ಎಂ 4411 ನಂಬರಿನ ಐಶರ್ ಟ್ರ್ಯಾಕ್ಟರ್ ಅನ್ನು ಸಾರ್ವಜನಿಕ ರಸ್ತೆಯಲ್ಲಿ ಮಾನವನ ಪ್ರಾಣಕ್ಕೆ ಹಾನಿ ಉಂಟು ಮಾಡುವ ರೀತಿಯಲ್ಲಿ ಚಾಲನೆ ಮಾಡಿಕೊಂಡು ಬಂದು ಚಾಸಾ-2 ರವರು ಚಾಲನೆ ಮಾಡುತ್ತಿದ್ದ ಕೆಎ 13 ಇಯು 6877 ನಂಬರಿನ ಸ್ಕೂಟಿಗೆ ಡಿಕ್ಕಿ ಮಾಡಿ ಅಪಘಾತಪಡಿಸಿ ಗಾಯಾಳುವನ್ನು ಉಪಚರಿಸದೇ ಸ್ಥಳೀಯ ಪೊಲೀಸರಿಗೆ ಯಾವುದೇ ಮಾಹಿತಿಯನ್ನು

ನೀಡದೇ ಸ್ಥಳದಿಂದ ಹೋಗಿರುತ್ತೀರಿ, ಆದ್ದರಿಂದ ಆರೋಪಿಯಾದ ನೀವು ಭಾರತೀಯ ಮೋಟಾರು ವಾಹನ ಕಾಯ್ದೆ ಕಲಂ 187 ರಡಿಯಲ್ಲಿ ಮೇರೆಗೆ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದಲ್ಲಿ ಎಸಗಿರುತ್ತೀರಿ ಎಂದು ಆರೋಪಿಸಲಾಗಿದೆ.

ನಾಲ್ಕನೆಯದಾಗಿ ಮೇಲೆ ಹೇಳಿದ ದಿನಾಂಕ, ಸಮಯ ಹಾಗೂ ಸ್ಥಳದಲ್ಲಿ ಆರೋಪಿಯಾದ ನೀವು ಅಪಘಾತದ ಸಮಯದಲ್ಲಿ ಆರೋಪಿಯಾದ ನೀವು ಕೆಎ 46 ಎಂ 4411 ನಂಬರಿನ ಐಶರ್ ಟ್ರ್ಯಾಕ್ಟರ್ ವಾಹನಕ್ಕೆ ವಿಮೆಯನ್ನು ಹೊಂದಿರದೇ ಚಾಲನೆ ಮಾಡಿಕೊಂಡು ಬಂದು ಚಾಸಾ-2 ರವರಿಗೆ ಬೈಕಿಗೆ ಡಿಕ್ಕಿ ಮಾಡಿ ಅಪಘಾತಪಡಿಸಿರುತ್ತೀರಿ. ಆದ್ದರಿಂದ ಆರೋಪಿಯಾದ ನೀವು ಭಾರತೀಯ ಮೋಟಾರು ವಾಹನ ಕಾಯ್ದೆ ಕಲಂ 146 ಸಹಕಲಂ 196 ರಡಿಯಲ್ಲಿ ಮೇರೆಗೆ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದಲ್ಲಿ ಎಸಗಿರುತ್ತೀರಿ ಎಂದು ಆರೋಪಿಸಲಾಗಿದೆ.

ಐದನೆಯದಾಗಿ ಮೇಲೆ ಹೇಳಿದ ದಿನಾಂಕ, ಸಮಯ ಹಾಗೂ ಸ್ಥಳದಲ್ಲಿ ಆರೋಪಿಯಾದ ನೀವು ಅಪಘಾತದ ಸಮಯದಲ್ಲಿ ಆರೋಪಿಯಾದ ನೀವು ಚಾಲನಾ ಪರವಾನಿಗೆಯನ್ನು ಹೊಂದಿರದೇ ಕೆಎ 46 ಎಂ 4411 ನಂಬರಿನ ಐಶರ್ ಟ್ರ್ಯಾಕ್ಟರ್ ಅನ್ನು ಚಾಲನೆ ಮಾಡಿಕೊಂಡು ಬಂದು ಚಾಸಾ-2 ರವರಿಗೆ ಬೈಕಿಗೆ ಡಿಕ್ಕಿ ಮಾಡಿ ಅಪಘಾತಪಡಿಸಿರುತ್ತೀರಿ. ಆದ್ದರಿಂದ ಆರೋಪಿಯಾದ ನೀವು ಭಾರತೀಯ ಮೋಟಾರು ವಾಹನ ಕಾಯ್ದೆ ಕಲಂ 3(1) ಸಹಕಲಂ 181 ರಡಿಯಲ್ಲಿ ಮೇರೆಗೆ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದಲ್ಲಿ ಎಸಗಿರುತ್ತೀರಿ ಎಂದು ಆರೋಪಿಸಲಾಗಿದೆ.

ಮೇಲೆ ಹೇಳಿದಂತಹ ಆಪಾದನೆಗಳು ಈ ನ್ಯಾಯಾಲಯದಿಂದ ವಿಚಾರಣೆ ಆಗ ತಕ್ಕದ್ದು ಅಂಥ ಈ ಮೂಲಕ ಆದೇಶ ಮಾಡಿರುತ್ತೇನೆ.

ಪ್ರಶ್ನೆಃ- ಈಗ ಓದಿ ಹೇಳಿದ ಆಪಾದನೆಗಳನ್ನು ಅರ್ಥ ಮಾಡಿಕೊಂಡಿರುತ್ತೀರಾ?

ಉತ್ತರಃ-

ಪ್ರಶ್ನೆಃ- ಮೇಲೆ ಹೇಳಿದ ಆಪಾದನೆಗಳನ್ನು ಒಪ್ಪಿಕೊಳ್ಳುವಿರಾ? ಅಥವಾ ವಿಚಾರಣೆ ಆಗಬೇಕೆನ್ನುವಿರಾ?

ಉತ್ತರಃ-

(ಮೇಲ್ಕಂಡ ಆಪಾದನೆಯನ್ನು ಆರೋಪಿಗೆ ತಿಳಿಯುವ ಭಾಷೆಯಲ್ಲಿ ತೆರೆದ ನ್ಯಾಯಾಲಯದಲ್ಲಿ ಓದಿ, ಹೇಳಿ, ಅವರು ಕೊಟ್ಟ ಉತ್ತರವನ್ನು ಬರೆದುಕೊಂಡಿದ್ದು, ಅವು ಸರಿಯಾಗಿರುತ್ತದೆ ಎಂದು ಈ ಮೂಲಕ ದೃಡೀಕರಿಸುತ್ತೇನೆ.)

ದಿನಾಂಕಃ 18.05.2026
ಸ್ಥಳಃ ಬೇಲೂರು.

(ಶ್ರೀ.ನಾಗೇಂದ್ರ)
ಪ್ರಧಾನ ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ
ಬೇಲೂರು.